ಅಪರ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ
ದಂಡಾಧಿಕಾರಿಗಳವರ ನ್ಯಾಯಾಲಯ, ಹುಣಸೂರು.

**ಸಿ.ಸಿ. ಸಂಖ್ಯೆಃ 747/2019**

ಫಿರ್ಯಾದಿದಾರರುಃ ಸರ್ಕಾರದ ಪರ ಬಿಳಿಕೆರೆ ಪೊಲೀಸ್ ಠಾಣೆ
ಹುಣಸೂರು ವೃತ್ತ, ಹುಣಸೂರು.

ವಿರುದ್ಧ,

ಆರೋಪಿ/ಗಳು ಃ ಎ1. ಸಿಖಂದರ್ ಖಾನ್
ತಂದೆ - ಅಹಮದ್ ಖಾನ್
ಸುಮಾರು 45 ವರ್ಷ ವಯಸ್ಸು,
ವಾಸಃ ಬನ್ನಿಕುಪ್ಪೆ ಗ್ರಾಮ,
ಹುಣಸೂರು ತಾಲ್ಲೂಕು,
ಮೈಸೂರು ಜಿಲ್ಲೆ.

## ದೋಷಾರೋಪಣೆ

ಶ್ರೀಮತಿ ಪೂಜಾ ಬೆಳಕೇರಿ, ಅಪರ ಸಿವಿಲ್ ನ್ಯಾಯಾಧೀಶರು ಹಾಗೂ ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳು, ಹುಣಸೂರು ಆದ ನಾನು ಆರೋಪಿಯಾದ ನಿಮ್ಮ ಮೇಲೆ ಮಾಡುವ ದೋಷಾರೋಪಣೆ ಏನೆಂದರೆಃ

1. ದಿನಾಂಕ 22.10.2017 ರಂದು ಬೆಳಿಗ್ಗೆ 7.30 ಗಂಟೆ ಸಮಯದಲ್ಲಿ ಬಿಳಿಕೆರೆ ಪೊಲೀಸ್ ಠಾಣಾ ಸರಹದ್ದಿಗೆ ಸೇರಿದ ಬನ್ನಿಕುಪ್ಪೆ ಗ್ರಾಮದಲ್ಲಿ ಆರೋಪಿಯ ಮನೆ ಮುಂದೆ ಸಾರ್ವಜನಿಕರು ತಿರುಗಾಡುವ ರಸ್ತೆಯಲ್ಲಿ ಆರೋಪಿಯಾದ ನೀವು 90 ಎಂ.ಎಲ್ ಅಳತೆಯ ಒರಿಜಿನಲ್ ಛಾಯ್ಸು ವಿಸ್ಕಿ ಟೆಟ್ರಾ ಪ್ಯಾಕೇಟುಗಳನ್ನು ಹಾಗೂ 180 ಎಂ.ಎಲ್ ನ ಓಲ್ಡ ತವರೆನ್ ವಿಸ್ಕಿ ಸಾಚೇಟ್ ಗಳ ಒಟ್ಟು ಬೆಲೆ 1016/- ನ ಬೆಲೆ ಬಾಳುವ ಮಧ್ಯದ ಪ್ಯಾಕೇಟುಗಳನ್ನು ಅಕ್ರಮವಾಗಿ ಯಾವುದೇ ರಹದಾರಿ ಇಲ್ಲದೇ ಮತ್ತು ಯಾವುದೇ ಅಧಿಕೃತ ಅಂಗಡಿಯ ಬಿಲ್ಲುಗಳು ಇಲ್ಲದೇ ನಿಮ್ಮ ಬಳಿ ಸಂಗ್ರಹಿಸಿ ಇಟ್ಟುಕೊಂಡಿರುತ್ತೀರೆಂದು, ಆ ಮೂಲಕ ಕರ್ನಾಟಕ ಅಬಕಾರಿ ಕಾಯಿದೆ ಕಲಂ 32 ರೀತ್ಯಾ ದಂಡನೀಯ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞೆಯೊಳಗೆ ಎಸಗಿರುತ್ತೀರಿ?

2. ಕೊನೆಯದಾಗಿ, ಮೇಲ್ಕಂಡ ಸ್ಥಳ, ದಿನಾಂಕ, ಮತ್ತು ಸಮಯದಲ್ಲಿ ಅದೇ ವಿಚಾರಕ್ಕೆ ಸಂಬಂಧಪಟ್ಟಂತೆ, ಆರೋಪಿಯಾದ ನೀವು ಅಪರಾಧ ಮಾಡುವ ಉದ್ದೇಶವುಳ್ಳವರಾಗಿ, 90 ಎಂ.ಎಲ್ ಅಳತೆಯ ಒರಿಜಿನಲ್ ಛಾಯ್ಸ ವಿಸ್ಕಿ ಟೆಟ್ರಾ ಪ್ಯಾಕೇಟುಗಳನ್ನು ಹಾಗೂ 180 ಎಂ.ಎಲ್ ನ ಓಲ್ಡ ತವರೆನ್ ವಿಸ್ಕಿ ಸಾಚೇಟ್ ಗಳ ಒಟ್ಟು ಬೆಲೆ 1016/- ನ ಬೆಲೆ ಬಾಳುವ ಮದ್ಯದ ಪ್ಯಾಕೇಟುಗಳನ್ನು ಅಕ್ರಮವಾಗಿ ತಮ್ಮ ಬಳಿ ಸಂಗ್ರಹಿಸಿಕೊಂಡು ಸಾರ್ವಜನಿಕರಿಗೆ ಹೆಚ್ಚಿನ ಬೆಲೆಗೆ ಮಾರಾಟ ಮಾಡುತ್ತಿದ್ದೀರೆಂದು, ಆ ಮೂಲಕ ಕರ್ನಾಟಕ ಅಬಕಾರಿ ಕಾಯಿದೆ ಕಲಂ 34 ರೀತ್ಯಾ ದಂಡನೀಯ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞೆಯೊಳಗೆ ಎಸಗಿರುತ್ತೀರಿ?

(ಮೇಲ್ಕಂಡ ಆಪಾದನೆಗಳು ಈ ನ್ಯಾಯಾಲಯದ ಸಂಜ್ಞೆಯೊಳಗೆ ಬರುತ್ತಿದ್ದು ಹಾಗೂ ಸದರಿ ಆಪಾದನೆಗಳಿಗೆ ಆರೋಪಿಯಾದ ನೀವು ಈ ನ್ಯಾಯಾಲಯದಲ್ಲಿ ವಿಚಾರಣೆಗೆ ಗುರಿಯಾಗಬೇಕೆಂದು ಈ ಮೂಲಕ ನಿರ್ದೇಶಿಸುತ್ತೇನೆ.)

ದಿನಾಂಕಃ **08.11.2023**

**(ಪೂಜಾ ಬೆಳಕೇರಿ)**
ಹೆಚ್ಚುವರಿ ದಿವಾಣಿ ನ್ಯಾಯಾಧೀಶರು ಮತ್ತು
ಪ್ರ.ದ.ನ್ಯಾ.ದಂಡಾಧಿಕಾರಿಗಳು, ಹುಣಸೂರು.

## ಅಪರ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳವರ ನ್ಯಾಯಾಲಯ, ಹುಣಸೂರು.

**ಸಿ.ಸಿ. ಸಂಖ್ಯೆಃ 747/2019**

ಫಿರ್ಯಾದಿದಾರರುಃ ಸರ್ಕಾರದ ಪರ ಬಿಳಿಕೆರೆ ಪೊಲೀಸ್ ಠಾಣೆ
ಹುಣಸೂರು ವೃತ್ತ, ಹುಣಸೂರು.

ವಿರುದ್ಧ,

ಆರೋಪಿ/ಗಳು ಃ ಎ1. ಸಿಖಂದರ್ ಖಾನ್
ತಂದೆ - ಅಹಮದ್ ಖಾನ್

ಭಾರತೀಯ ದಂಡ ಸಂಹಿತೆ ಕಲಂ **240(2)** ರ ಅಡಿಯಲ್ಲಿ ಆರೋಪಿಯ ಹೇಳಿಕೆ

ಪ್ರಶ್ನೆಃ ನಿಮಗೆ ಈಗ ಓದಿ ಹೇಳಿದ ದೋಷಾರೋಪಣೆ ತಿಳಿಯಿತೆ?

ಉತ್ತರಃ

ಪ್ರಶ್ನೆಃ ತಪ್ಪೊಪ್ಪಿಕೊಳ್ಳುವಿರೋ, ವಿಚಾರಣೆಯಾಗಬೇಕೆನ್ನುವಿರೋ?

ಉತ್ತರಃ

ಮೇಲ್ಕಂಡ ದೋಷಾರೋಪಣೆಯನ್ನು ತೆರೆದ ನ್ಯಾಯಾಲಯದಲ್ಲಿ ಓದಿ ಹೇಳಿದ್ದು, ಆರೋಪಿಯು ನೀಡಿದ ಉತ್ತರವನ್ನು ಹಾಗೆಯೇ ದಾಖಲಿಸಿಕೊಂಡಿದೆಯೆಂದು ಈ ಮೂಲಕ ದೃಢೀಕರಿಸುತ್ತೇನೆ.

(ಪೂಜಾ ಬೆಳಕೇರಿ)
ದಿನಾಂಕಃ **08.11.2023** ಅಪರ ಸಿವಿಲ್ ನ್ಯಾಯಾಧೀಶರು ಹಾಗೂ
ಪ್ರ.ದಂ.ನ್ಯಾ.. ದಂಡಾಧಿಕಾರಿಗಳು, ಹುಣಸೂರು.